# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 570(618)
2) ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
3) ಉತ್ತರಿಸುವ ದಿನಾಂಕ : 24.07.2019
4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವನ್ಯಜೀವಿ ಸಂಘರ್ಷದ ಸಂತ್ರಸ್ತರ ಮನವಿಗಳನ್ನು ಸ್ವೀಕರಿಸಿ ಸರ್ಕಾರಕ್ಕೆ ಸಲ್ಲಿಸಲು ಸರ್ಕಾರದ ವತಿಯಿಂದ ಯಾವ ಯಾವ ಸೇವಾ ಸಂಸ್ಥೆಗಳನ್ನು ಗುರುತಿಸಲಾಗಿದೆ; ಅವುಗಳ ಕೆಲಸಗಳೇನು; ಸಂತ್ರಸ್ತರ ಮನವಿಯನ್ನು ಸರ್ಕಾರಕ್ಕೆ ಸಲ್ಲಿಸಲು ಬ್ರೋಕರ್‌ಗಳ ಅವಶ್ಯಕತೆ ಇದೆಯೇ; | ವನ್ಯಪ್ರಾಣಿಗಳ ಸಂಘರ್ಷದ ಸಂತ್ರಸ್ತರ ಮನವಿಗಳನ್ನು ಸ್ವೀಕರಿಸಿ ಸರ್ಕಾರಕ್ಕೆ ಸಲ್ಲಿಸಲು ಯಾವುದೇ ಸೇವಾ ಸಂಸ್ಥೆಗಳಿಗೆ ಅನುಮತಿ ನೀಡಿರುವುದಿಲ್ಲ. ಸಂತ್ರಸ್ತರ ಮನವಿಗಳನ್ನು ಸರ್ಕಾರಕ್ಕೆ ಸಲ್ಲಿಸಲು ಬ್ರೋಕರುಗಳ ಅವಶ್ಯಕತೆ ಇರುವುದಿಲ್ಲ. |
| ಇ) | ಸ್ವಯಂಸೇವಾ ಸಂಸ್ಥೆಗಳು ಸಂರಕ್ಷಿತ ಅರಣ್ಯದಲ್ಲಿ ಕಾರ್ಯಚಟುವಟಿಕೆಗಳನ್ನು ನಡೆಸಲು ಸರ್ಕಾರ ಅನುಮತಿ ನೀಡಿದೆಯೇ; ಇಲ್ಲವಾದಲ್ಲಿ, ಅಕ್ರಮವಾಗಿ ಅರಣ್ಯದಲ್ಲಿ ಕಾರ್ಯಚಟುವಟಿಕೆಗಳನ್ನು ನಡೆಸುತ್ತಿರುವ ಸಂಸ್ಥೆಗಳ ಮೇಲೆ ಯಾವ ಕ್ರಮ ಕೈಗೊಂಡಿದೆ; | ಇಲ್ಲ.<br><br>ವನ್ಯಜೀವಿ (ಸಂರಕ್ಷಣಾ) ಕಾಯ್ದೆ, 1972ರನ್ವಯ ರಕ್ಷಿತ ಅರಣ್ಯ ಪ್ರದೇಶಗಳಲ್ಲಿ ಇಲಾಖೆಯ ಅನುಮತಿ ಇಲ್ಲದೇ ಪ್ರವೇಶಿಸಲು ಅವಕಾಶವಿರುವುದಿಲ್ಲ. ಒಂದುವೇಳೆ ಅನುಮತಿ ಇಲ್ಲದೇ ಯಾವುದೇ ವ್ಯಕ್ತಿ/ಸಂಸ್ಥೆಯವರು ರಕ್ಷಿತ ಅರಣ್ಯ ಪ್ರದೇಶಗಳೊಳಗೆ ಪ್ರವೇಶಿಸಿ ಅಕ್ರಮ ಚಟುವಟಿಕೆಗಳಲ್ಲಿ ತೊಡಗಿದಲ್ಲಿ ಅಂತಹವರ ವಿರುದ್ಧ ವನ್ಯಜೀವಿ (ಸಂರಕ್ಷಣಾ) ಕಾಯ್ದೆ, 1972ರ ಪ್ರಕಾರ ಅರಣ್ಯ ಮೊಕದ್ದಮೆ ದಾಖಲಿಸಲು ಕ್ರಮಕೈಗೊಳ್ಳಲಾಗುವುದು. |
| ಈ) | ನಾಗರಹೊಳೆ ಮತ್ತು ಬಂಡೀಪುರ ಹುಲಿ ಸಂರಕ್ಷಿತ ಅರಣ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಯಂಸೇವಾ ಸಂಸ್ಥೆಗಳು ಸೇವೆಯ ಹೆಸರಿನಲ್ಲಿ ಅರಣ್ಯ ಸಂಪತ್ತನ್ನು ಲೂಟಿ ಹೊಡೆಯುವುದು ಅಥವಾ ವನ್ಯಜೀವಿಗಳ ಬೇಟೆ ಮಾಡುತ್ತಿಲ್ಲ ಎಂಬುದಾಗಿ ಸರ್ಕಾರ ರಾಜ್ಯದ ಜನತೆಗೆ ಖಾತರಿ ನೀಡುತ್ತದೆಯೇ; ಇಲ್ಲವಾದಲ್ಲಿ, ಅಂತಹ ಸ್ವಯಂಸೇವಾ ಸಂಸ್ಥೆಗಳನ್ನು ಮೀಸಲು ಅರಣ್ಯದಲ್ಲಿ ಅನಧಿಕೃತವಾಗಿ ಪ್ರವೇಶ ಮಾಡದಂತೆ ತಡೆಯಲು ಸರ್ಕಾರ ಯಾವ ಕ್ರಮಕೈಗೊಂಡಿದೆ? | ನಾಗರಹೊಳೆ ಮತ್ತು ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸಲು ಯಾವುದೇ ಸ್ವಯಂಸೇವಾ ಸಂಸ್ಥೆಗಳಿಗೆ ಅನುಮತಿ ನೀಡಿರುವುದಿಲ್ಲ.<br><br>ವನ್ಯಜೀವಿ (ಸಂರಕ್ಷಣಾ) ಕಾಯ್ದೆ, 1972ರನ್ವಯ ರಕ್ಷಿತ ಅರಣ್ಯ ಪ್ರದೇಶಗಳಲ್ಲಿ ಇಲಾಖೆಯ ಅನುಮತಿ ಇಲ್ಲದೇ ಪ್ರವೇಶಿಸಲು ಅವಕಾಶವಿರುವುದಿಲ್ಲ. ಒಂದುವೇಳೆ ಅನುಮತಿ ಇಲ್ಲದೇ ಯಾವುದೇ ವ್ಯಕ್ತಿ/ಸಂಸ್ಥೆಯವರು ರಕ್ಷಿತ ಅರಣ್ಯ ಪ್ರದೇಶಗಳೊಳಗೆ ಪ್ರವೇಶಿಸಿ ಅಕ್ರಮ ಚಟುವಟಿಕೆಗಳಲ್ಲಿ ತೊಡಗಿದಲ್ಲಿ ಅಂತಹವರ ವಿರುದ್ಧ ವನ್ಯಜೀವಿ (ಸಂರಕ್ಷಣಾ) ಕಾಯ್ದೆ, 1972ರ ಪ್ರಕಾರ ಅರಣ್ಯ ಮೊಕದ್ದಮೆ ದಾಖಲಿಸಲು ಕ್ರಮಕೈಗೊಳ್ಳಲಾಗುವುದು. |

ಸಂಖ್ಯೆ: ಅಪಜೀ 47 ಎಫ್‌ಡಬ್ಲ್ಯೂಎಲ್ 2019

**(ಸತೀಶ್ ಎಲ್. ಜಾರಕಿಹೊಳಿ)**
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು